ಆಗಿದ್ದು, ಸದರಿ ಮಾರ್ಗವು ಸಂಪೂರ್ಣ ರಕ್ಷಿತಾರಣ್ಯ ಪ್ರದೇಶದಲ್ಲಿ ಹಾದು ಹೋಗಬೇಕಾಗಿರುವುದರಿಂದ ಮಾರ್ಗವನ್ನು ನಿರ್ಮಿಸಲು ಒಟ್ಟು 23.1 ಹೆಕ್ಟೇರ್ ಅರಣ್ಯ ಭೂಮಿಗೆ ಅರಣ್ಯ ಇಲಾಖೆಯಿಂದ ಅನುಮೋದನೆ ದೊರೆಯಬೇಕಾಗಿದೆ. ಮೊದಲನೇ ಹಂತದಲ್ಲಿ 18.15 ಹೆಕ್ಟೇರ್ ಅರಣ್ಯ ಭೂಮಿಗೆ ಕೇಂದ್ರ ಸರ್ಕಾರದಿಂದ ಅನುಮೋದನೆ ದೊರೆತಿದ್ದು, 2ನೇ ಹಂತದಲ್ಲಿ 4.95 ಹೆಕ್ಟೇರ್ ಅರಣ್ಯ ಭೂಮಿಗೆ ಅನುಮೋದನೆ ದೊರೆಯಬೇಕಾಗಿದೆ. ಈ ವಿಷಯದ ಬಗ್ಗೆ ದಿನಾಂಕ: 3-11-2011 ರಂದು ಬೆಂಗಳೂರಿನ ಪರಿಸರ ಮತ್ತು ಅರಣ್ಯ ಇಲಾಖೆ ಕಛೇರಿಯಲ್ಲಿ ಸಭೆ ನಡೆದಿದ್ದು, ಸದರಿ ಭೂಮಿ ಮಂಜೂರು ಕೋರಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಕೇಂದ್ರ ಸರ್ಕಾರದಿಂದ ಅನುಮೋದನೆ ದೊರೆತ ಕೂಡಲೇ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು ಹಾಗೂ ಪ್ರಸ್ತುತ ಗುತ್ತಿಗೆದಾರರಾದ ಮೆ: ಬರೂಕ ಪವರ್ ಕಾರ್ಪೊರೇಷನ್ ಲಿ. ಬೆಂಗಳೂರು ಇವರು ಲೈನ್ ಕಾಮಗಾರಿ ಬಗ್ಗೆ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರಿನಲ್ಲಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ವಿರುದ್ಧ ಆರ್ಬಿಟ್ರೇಟರ್ ನೇಮಕಾತಿಗೆ ಸಂಬಂಧಿಸಿದಂತೆ ಸಿ.ಎಂ.ಪಿ. 42/2011 ಅಡಿಯಲ್ಲಿ ದಾವೆಯನ್ನು ಹೂಡಿದ್ದು, ಶ್ರೀ ಶಿವಶಂಕರ ಭಟ್, ನಿವೃತ್ತ ನ್ಯಾಯಾಧೀಶರು ಇವರನ್ನು ಆರ್ಬಿಟ್ರೇಟರ್ ಆಗಿ ಕಾರ್ಯನಿರ್ವಹಿಸಲು ಕರ್ನಾಟಕ ಉಚ್ಚ ನ್ಯಾಯಾಲಯವು ಆದೇಶಿಸಿರುತ್ತದೆ. ಆರ್ಬಿಟ್ರೇಷನ್ ನಡವಳಿ ಪ್ರಾರಂಭವಾಗಬೇಕಿರುತ್ತದೆ.

ಆ) ನಗರ, ಸಂಪೆಕಟ್ಟೆ, ರಿಪ್ಪನ್‌ಪೇಟೆ ಗ್ರಾಮಗಳಲ್ಲಿ ವಿದ್ಯುತ್ ಉಪಕೇಂದ್ರಗಳನ್ನು ಸ್ಥಾಪಿಸುವ ಕುರಿತು ಅದರ ತಾಂತ್ರಿಕ ಸಾಧ್ಯತೆಗಳನ್ನು ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು. ಮಂಡಗದ್ದೆ ಗ್ರಾಮದಲ್ಲಿ ವಿದ್ಯುತ್ ಉಪಕೇಂದ್ರವನ್ನು ಸ್ಥಾಪಿಸಲು ಯಾವುದೇ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ.

ಇ) ಮತ್ತು

ಈ) ತೀರ್ಥಹಳ್ಳಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಂಜೂರಾದ ಕಾಮಗಾರಿಗಳಿಗೆ ಯಾವುದೇ ಟ್ರಾನ್ಸ್‌ಫಾರ್ಮರ್‌ಗಳ ಮತ್ತು ಕಂಬಗಳ ಕೊರತೆ ಇರುವುದಿಲ್ಲ. ಲೈನ್‌ಮನ್‌ಗಳ ಕೆಲವು ಹುದ್ದೆಗಳು ಬಹಳ ಸಮಯದಿಂದ ಖಾಲಿ ಇದ್ದು, ನೇಮಕಾತಿ ಪ್ರಕ್ರಿಯೆಯು ಪ್ರಗತಿಯಲ್ಲಿದೆ. ಈ ಕಾಮಗಾರಿಗಳಿಗೆ ಹಣದ ಕೊರತೆ ಇರುವುದಿಲ್ಲ.

ತುಂಗಳ ಗುಡ್ಡದ ಮೇಲೆ ಗಾಳಿ ವಿದ್ಯುತ್ ಯಂತ್ರ ಅಳವಡಿಕೆ

184 (330) ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬಾರಾವ್ (ಜಮಖಂಡಿ):– ಇಂಧನ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಗಾಳಿ ವಿದ್ಯುತ್ ಯಂತ್ರದ (Wind Power Generation) ಮೂಲಕ ರಾಜ್ಯದಲ್ಲಿ ಎಷ್ಟು ವಿದ್ಯುತ್‌ನ್ನು ಉತ್ಪಾದಿಸಲಾಗುತ್ತಿದೆ;

ಆ) ಈ ಪದ್ಧತಿಯಿಂದಲೇ ಹೆಚ್ಚು ವಿದ್ಯುತ್‌ನ್ನು ಉತ್ಪಾದಿಸುವ ಗುರಿ ಸರಕಾರಕ್ಕೆ ಇದೆಯೇ;

ಇ) ಜಮಖಂಡಿ ತಾಲ್ಲೂಕಿನ ತುಂಗಳ ಗ್ರಾಮದ ಪಕ್ಕದಲ್ಲಿ ಸಾಕಷ್ಟು ಎತ್ತರದ ಗುಡ್ಡ ಹಾಗೂ ಸಾಕಷ್ಟು ಗಾಳಿಯ ಅನುಕೂಲತೆ ಇರುವುದರಿಂದ ಈ ಯಂತ್ರಗಳನ್ನು ಅಲ್ಲಿ ಅಳವಡಿಸಲಾಗುವುದೇ?

ಶೋಭಾ ಕರಂದ್ಲಾಜೆ :– (ಇಂಧನ ಸಚಿವರು):–

ಅ) ರಾಜ್ಯದಲ್ಲಿ ಒಟ್ಟು 1890.685 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದ್ದು ಅವುಗಳ ಮೂಲಕ ಪವನ ವಿದ್ಯುತನ್ನು ಉತ್ಪಾದಿಸಲಾಗುತ್ತಿದೆ.

ಆ) ಈಗಾಗಲೇ ರಾಜ್ಯದಲ್ಲಿ ಒಟ್ಟು 1890.685 ಮೆಗಾ ವ್ಯಾಟ್ ಸಾಮರ್ಥ್ಯದ ಯೋಜನೆಗಳಿಂದ ಪವನ ವಿದ್ಯುತ್ ಉತ್ಪಾದನೆಯಾಗುತ್ತಿದ್ದು, 2013–2014 ನೇ ಸಾಲಿನ ಅಂತ್ಯಕ್ಕೆ ಸುಮಾರು 1500 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ತನ್ನು ಉತ್ಪಾದಿಸುವ ಗುರಿ ಹೊಂದಲಾಗಿದೆ.

ಇ) ಜಮಖಂಡಿ ತಾಲ್ಲೂಕಿನ ತುಂಗಳ ಗ್ರಾಮದ ವ್ಯಾಪ್ತಿಯಲ್ಲಿ 37 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಸ್ಥಾಪನೆಗಾಗಿ ಖಾಸಗಿ ಅಭಿವೃದ್ಧಿದಾರರು ಅರ್ಜಿಯನ್ನು ಸಲ್ಲಿಸಿರುತ್ತಾರೆ.

ಜಮಖಂಡಿಯ KSRTC ಯ ಕಾರ್ಯಗಾರಕ್ಕೆ ಸ್ಥಳ

185 (331) ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬರಾವ್ (ಜಮಖಂಡಿ):– ಮಾನ್ಯ ಗೃಹ ಮತ್ತು ಸಾರಿಗೆ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಅತೀ ಪ್ರಯಾಣಿಕರು ಹಾಗೂ ಹೆಚ್ಚು ವಾಹನಗಳ ಓಡಾಟ ಜಮಖಂಡಿ ಮೂಲಕ ನಡೆಯುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ;